# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1613 |
| ಉತ್ತರಿಸಬೇಕಾದ ದಿನಾಂಕ | 18.03.2026 |
| ಸದಸ್ಯರ ಹೆಸರು | ಶ್ರೀ ಡಾ: ತಳವಾರ್ ಸಾಬಣ್ಣ (ನಾಮ ನಿರ್ದೇಶಿತರು) |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿರುವ ಸ್ಲಂಗಳು ಜನರು ವಾಸಿಸಲು ಯೋಗ್ಯವಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಹೌದು</td></tr>
<tr><td>ಆ)</td><td>ಮೂಲಭೂತ ಸೌಕರ್ಯಗಳ ಕೊರತೆಗಳಿಂದ ಸ್ಲಂಗಳಲ್ಲಿ ವಾಸಿಸುತ್ತಿರುವ ಜನರು ರೋಗ-ರುಜಿನಗಳಿಗೆ ಬಲಿಯಾಗಿ ನರಕದ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇವುಗಳ ಪರಿಹಾರಕ್ಕೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;</td><td>ಅಭಿವೃದ್ಧಿ ಕಾಮಗಾರಿ<br><br>ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ಕೊಳಗೇರಿ ಗುಣಲಕ್ಷಣಗಳನ್ನು ಹೊಂದಿರುವ ಕೊಳಚೆ ಪ್ರದೇಶಗಳನ್ನು ಗುರುತಿಸಿ, ಮಂಡಳಿಯ ಕಾಯ್ದೆಯಡಿ ಘೋಷಣೆ ಹೊರಡಿಸಿ, ಕೊಳಗೇರಿ ಸುಧಾರಣೆ ಯೋಜನೆಯಡಿ ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ರಾಜ್ಯಾದ್ಯಂತ ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಸಮುದಾಯ ಭವನ ಇತ್ಯಾದಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾ ಯೋಜನೆ ತಯಾರಿಸಿ, ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗಿರುತ್ತದೆ.<br><br>ಅದರಂತೆ, ಮೂಲಭೂತ ಸೌಕರ್ಯಗಳ ಕೊರತೆಗಳಿಂದ ಎದುರಿಸುತ್ತಿರುವ ಕೊಳಗೇರಿ ಪ್ರದೇಶಗಳಿಗೆ ಸಂಬಂಧಪಟ್ಟ ಜನಪ್ರತಿ ನಿಧಿಗಳು, ಸ್ಲಂ ಮುಖಂಡರುಗಳಿಂದ ಮನವಿ ಸಲ್ಲಿಸಿದ್ದಲ್ಲಿ ಸದರಿ ಮನವಿಗಳನ್ನು ಸಂಬಂಧಪಟ್ಟ ವಿಭಾಗ ಕಛೇರಿಗಳಿಗೆ ವರ್ಗಾಯಿಸಿ ಆದ್ಯತೆ ಮೇರೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅಗತ್ಯ ಕ್ರಮ ವಹಿಸಲಾಗುವುದು.</td></tr>
<tr><td>ಇ)</td><td>ರಾಜ್ಯದ ಸುಮಾರು 70 ಲಕ್ಷ ನಿವಾಸಿಗಳು ಮೂಲಭೂತ ಸೌಕರ್ಯಗಳಿಲ್ಲದೆ ಜೀವನ ನಡೆಸುತ್ತಿದ್ದು ಸುಸಜ್ಜಿತ ನಿವೇಶನಗಳನ್ನು ಒದಗಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ: ಸ್ಲಂಗಳಲ್ಲಿ ವಾಸಿಸುತ್ತಿರುವ ಜನರ ಸಾಮಾಜಿಕ-ಆರ್ಥಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆಯೇ? (ವಿವರ ನೀಡುವುದು)</td><td>ವಸತಿ ಸೌಲಭ್ಯ :-<br><br>ಕರ್ನಾಟಕ ರಾಜ್ಯಾದ್ಯಂತ ವಿವಿಧ ನಗರ / ಪಟ್ಟಣಗಳ ವ್ಯಾಪ್ತಿಯಲ್ಲಿ ಬರುವ ಆಯ್ದು ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳೊಂದಿಗೆ 2007-08ನೇ ನಿಂದ 2014-15ನೇ ಸಾಲಿ ವರೆವಿಗೂ ಕೇಂದ್ರ ಪುರಸ್ಕೃತ ವಿವಿಧ ವಸತಿ ಯೋಜನೆಗಳಡಿ 382 ಕೊಳಗೇರಿ ಪ್ರದೇಶಗಳಲ್ಲಿ ಕಚ್ಚಾ – ಸೆಮಿಪಕ್ಕ ಮನೆಗಳನ್ನು ತೆರವುಗೊಳಿಸಿ, ಪಕ್ಕ ಮನೆಗಳನ್ನು ನಿರ್ಮಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ.
<table>
<tr><th>ಕ್ರ ಸಂ</th><th>ಯೋಜನೆ</th><th>ನಿರ್ಮಿಸಿರುವ ಮನೆಗಳ ಸಂಖ್ಯೆ</th><th>ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆ</th><th>ಕೊಳಗೇರಿ ಪ್ರದೇಶಗಳ ಸಂಖ್ಯೆ</th></tr>
<tr><td>1</td><td>ಬಿ.ಎಸ್.ಯು.ಪಿ</td><td>23315</td><td>23315</td><td>133</td></tr>
<tr><td>2</td><td>ಐ.ಹೆಚ್.ಎಸ್.ಡಿ.ಪಿ</td><td>17237</td><td>17237</td><td>172</td></tr>
<tr><td>3</td><td>ರಾಜೀವ್ ಆವಾಸ್ ಯೋಜನೆ</td><td>19897</td><td>19182</td><td>77</td></tr>
<tr><td></td><td>ಒಟ್ಟು</td><td>60449</td><td>59734</td><td>382</td></tr>
</table>
"715 ಮನೆಗಳು ಹಂಚಿಕೆಗೆ ಬಾಕಿ ಇರುತ್ತದೆ"</td></tr>
</table>

| | | |
|---|---|---|
| | | ಪ್ರಸ್ತುತ ರಾಜ್ಯವನ್ನು ಸ್ಲಂ ಮುಕ್ತಗೊಳಿಸಲು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ರಾಜ್ಯಾದ್ಯಂತ ಬರುವ ಆಯ್ದು ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ಕಚ್ಚಾ-ಸಮೀಪಕ್ಕ ಮನೆಗಳಲ್ಲಿ ವಾಸಿಸುತ್ತಿರುವ ಕೊಳಗೇರಿ ನಿವಾಸಿಗಳಿಗೆ ಬೇಡಿಕೆಯಂತೆ, ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಡಾ: ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ ಮತ್ತು ವಾಜಪೇಯಿ ನಗರ ವಸತಿ ಯೋಜನೆಯನು ಸಂಯೋಜನೆಗೊಳಿಸಿ ಮನೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ.<br><br>ಅದರಂತೆ, ಒಟ್ಟು 295 ಯೋಜನೆಗಳಲ್ಲಿ 1,80,253 ಮನೆಗಳನ್ನು ನಿರ್ಮಾಣ ಮಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ವಿವಿಧ ಹಂತಗಳಲ್ಲಿ ಅನುಮೋದನೆ ದೊರಕಿರುತ್ತದೆ. ಅವುಗಳಲ್ಲಿ 1653 ಮನೆಗಳು ಕೇಂದ್ರದಿಂದ ಕಡಿತಗೊಂಡಿರುತ್ತದೆ. ಅದರಂತೆ 1,78,600 ಮನೆಗಳಲ್ಲಿ 1,29,986 ಮನೆಗಳನು ಪ್ರಾರಂಭಿಸಿದ್ದು, 86,651 ಮನೆಗಳ ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದ 43,335 ಮನೆಗಳ ನಿರ್ಮಾಣ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ. 48,614 ಮನೆಗಳನ್ನು ಪ್ರಾರಂಭಿಸಬೇಕಾಗಿರುತ್ತದೆ.<br><br>ಒಟ್ಟಾರೆ ಪೂರ್ಣಗೊಂಡಿರುವ 86,651 ಮನೆಗಳ ಪೈಕಿ 36,789 ಮನೆಗಳನ್ನು ಪ್ರಥಮ ಹಂತದಲ್ಲಿ ಮಾರ್ಚ್ 2024 ರಲ್ಲಿ ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. 2026 ಜನವರಿ ಮಾಹೆಯಲ್ಲಿ 42,345 ಮನೆಗಳನ್ನು ಲೋಕಾರ್ಪಣೆ ಮಾಡಲಾಗಿರುತ್ತದೆ. ಬಾಕಿ ಮನೆಗಳನ್ನು 7,517 ಮನೆಗಳನ್ನು 3ನೇ ಹಂತದಲ್ಲಿ ಹಂಚಿಕೆ ಮಾಡಲು ಉದ್ದೇಶಿಸಲಾಗಿದೆ. ಪ್ರಗತಿಯಲ್ಲಿರುವ ಮನೆಗಳನ್ನು ಕೇಂದ್ರ ಸರ್ಕಾರ ಸೆಪ್ಟೆಂಬರ್ 2026 ರೊಳಗೆ ಪೂರ್ಣಗೊಳಿಸಲು ನಿಗಧಿಪಡಿಸಿರುವಂತೆ, ಸದರಿ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ. ಸ್ಲಂ ಪ್ರದೇಶಗಳಲ್ಲಿ ನಿವೇಶನ ನೀಡುವುದು ಕರ್ನಾಟಕ ಕೊಳಚೆ ಪ್ರದೇಶಗಳ (ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆಯಡಿ ಬರುವುದಿಲ್ಲ. |

ಸಂಖ್ಯೆ:ವಇ 26 ಎಸ್‌ಬಿಎಂ 2026

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು